ದಿ:-7/3/22ರಂದು ಸದನದಲ್ಲಿ ಚರ್ಚೆಯಾಗಿದೆ
ನಿ-330
ಕ್ರ-54

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್.ರವಿ ರವರು ನಿಯಮ-330ರ ಅಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ.

---

ವಿಷಯ: ಡ್ರಗ್ಸ್ ಮತ್ತು ಗಾಂಜಾದಂತಹ ಸಮಾಜ ವಿರೋದಿ ವಹಿವಾಟುಳು ಕಾನೂನು ಮತ್ತು ಸುವ್ಯವಸ್ಥೆ ಕಾಪಡಬೇಕಾದ ಪೊಲೀಸ್ ಇಲಾಖೆಯ ನೆರಳಿನಲ್ಲಿಯೇ ನಡೆಯತ್ತಿರುವ ಬಗ್ಗೆ ಇತ್ತೀಚಿನ ಕೆಲವು ಪ್ರಕರಣಗಳಿಂದ ಬೆಳಕಿಗೆ ಬಂದು ರಾಜ್ಯದ ಮಾನ ಹರಾಜಾಕಿವೆ. ಆದುದರಿಂದ ಪೊಲೀಸ್ ಇಲಾಖೆಯು ಡ್ರಗ್ಸ್ ವಿರುದ್ಧ ಸಮರ ಸಾರಿ ಈ ಜಾಲವನ್ನು ಬುಡಸಹಿತ ಕಿತ್ತೊಗೆದು ಸಮಾಜದ ಸ್ವಾಸ್ಥ್ಯ ಕಾಪಾಡಿ, ಸಾರ್ವಜನಿಕರ ನಂಬಿಕೆ ಮತ್ತು ವಿಶ್ವಾಸಗಳಿಸುವ ಕುರಿತು ಮಾನ್ಯ ಗೃಹ ಸಚಿವರ ಬಳಿ ವಿಷಯವನ್ನು ಪ್ರಸ್ತಾಪಿಸುವ ಬಗ್ಗೆ.

ಉತ್ತರ:

- ರಾಜ್ಯದಲ್ಲಿ ಕಳೆದ 3 ವರ್ಷಗಳಲ್ಲಿ ಗಾಂಜಾ ಮತ್ತು ಡ್ರಗ್ಸ್ ಮಾರಾಟ, ಸೇವನೆ ಮತ್ತು ಸರಬರಾಜು ಕುರಿತಂತೆ ಆರೋಪಿಗಳ ವಿರುದ್ಧ ಎನ್‌ಡಿಪಿಎಸ್ ಕಾಯ್ದೆ ಅಡಿಯಲ್ಲಿ ದಾಖಲಿಸಿರುವ ಪ್ರಕರಣಗಳ ಸಂಖ್ಯೆ, ಬಂಧಿಸಿರುವ ಆರೋಪಿಗಳ ಸಂಖ್ಯೆ ಈ ಕೆಳಕಂಡಂತಿದೆ.

| ವರ್ಷ | ಪ್ರಕರಣಗಳ ಸಂಖ್ಯೆ | ಬಂಧಿಸಿರುವ ಆರೋಪಿಗಳ ಸಂಖ್ಯೆ | |
|---|---|---|---|
| | | ದೇಶಿಯರು | ವಿದೇಶಿಯರು |
| 2019 | 1661 | 2219 | 44 |
| 2020 | 4054 | 5220 | 71 |
| 2021 | 5785 | 7661 | 185 |

<u>ರಾಜ್ಯದಲ್ಲಿ ಡ್ರಗ್ಸ್ ವಿರುದ್ಧ ಪೊಲೀಸ್ ಇಲಾಖೆಯು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.</u>

- ಮಾದಕ ದ್ರವ್ಯ ಪದಾರ್ಥಗಳ ವಹಿವಾಟನ್ನು ತಡೆಗಟ್ಟಲು ಹಾಗೂ ಪತ್ತೆಮಾಡಲು ಹಾಗೂ ಹದಿಹರೆಯದ ಯುವಕ ಮತ್ತು ಯುವತಿಯರನ್ನು ಇಂತಹ ದುಶ್ಚಟಗಳಿಂದ ತಡೆಗಟ್ಟುವ ಸಲುವಾಗಿ ಎಲ್ಲಾ ರೀತಿಯ ಸಾಧ್ಯವಿರುವ ಪ್ರಯತ್ನಗಳನ್ನು ಮಾಡಲಾಗುತ್ತಿದೆ.
- ಅಧಿಕಾರಿ ಸಿಬ್ಬಂದಿಗಳಿಗೆ ಮಾದಕ ದ್ರವ್ಯ (ಡ್ರಗ್ಸ್)ಗಳ ಮಾರಾಟ ಮತ್ತು ಸೇವಿಸುವವರ ಬಗ್ಗೆ ಮಾಹಿತಿ ಸಂಗ್ರಹಿಸುವಂತೆ, ತಲೆಮರೆಸಿಕೊಂಡಿರುವ ಆರೋಪಿಗಳನ್ನು ಪತ್ತೆಹಚ್ಚಲು ಸೂಚಿಸಲಾಗಿದೆ.
- ಮಾದಕ ವಸ್ತುಗಳ ಕಾಯ್ದೆ ಅಡಿಯಲ್ಲಿ ದಾಖಲಾಗಿರುವ ಪ್ರಕರಣಗಳ ತನಿಖೆಯಲ್ಲಿ ವೈಜ್ಞಾನಿಕ ವಿಧಾನಗಳನ್ನು ಅನುಸರಿಸಲು ತನಿಖಾಧಿಕಾರಿಗಳಿಗೆ ಅಗತ್ಯ ತರಬೇತಿ ಕಾರ್ಯಾಗಾರಗಳನ್ನು ಆಯೋಜಿಸಲಾಗುತ್ತಿದೆ.
- ಬಾರ್ ಮತ್ತು ರೆಸ್ಟೋರೆಂಟ್, ಕಾಫಿ-ಡೇ, ಪಬ್ ಮುಂತಾದ ಯುವಕರು ಹೆಚ್ಚಾಗಿ ಸೇರುವ ಸ್ಥಳಗಳು, ಶಾಲಾ ಕಾಲೇಜು ಆವರಣ, ಬಸ್ ನಿಲ್ದಾಣ ಹಾಗೂ ಇನ್ನಿತರೆ ಪ್ರದೇಶಗಳಲ್ಲಿ ಮಾದಕ ದ್ರವ್ಯ

ವಸ್ತುಗಳನ್ನು ಮಾರಾಟ ಮಾಡುತ್ತಿರುವ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ ಕಾನೂನಿನ ರೀತಿ ಕ್ರಮ ಜರುಗಿಸಲಾಗುತ್ತಿದೆ

- ವಿದೇಶಿಯರು ವಿಶೇಷವಾಗಿ ನೈಜೀರಿಯನ್ಸ್ ಪ್ರಜೆಗಳು ಮಾದಕ ವಸ್ತುಗಳ ಮಾರಾಟ/ಸೇವನೆಯ ಪ್ರಕರಣಗಳಲ್ಲಿ ಆರೋಪಿಗಳಿಗೆ ಯಾವ ಮೂಲಗಳಿಂದ ಮಾದಕ ವಸ್ತುಗಳ ಸರಬರಾಜಾಗುತ್ತಿರುವ ಬಗ್ಗೆ ಸಂಪೂರ್ಣ ಮಾಹಿತಿ ಸಂಗ್ರಹಿಸಲು ಸೂಚಿಸಲಾಗಿದೆ.
- ಠಾಣಾ ಸರಹದ್ದುಗಳಲ್ಲಿ ಹೊಯ್ಸಳ, ಚೀತಾ, ಅಧಿಕಾರಿ ಮತ್ತು ಸಿಬ್ಬಂದಿಗಳು ಗಸ್ತಿನಲ್ಲಿರುವ ಸಮಯದಲ್ಲಿ ಶಾಲಾ, ಕಾಲೇಜುಗಳ ಬಳಿ ಸೂಕ್ಷ್ಮವಾಗಿ ಗಮನಿಸಿ ಅಪರಿಚಿತ ವ್ಯಕ್ತಿಗಳ ಮಾಹಿತಿ ಸಂಗ್ರಹಿಸುವಂತೆ ಸೂಚಿಸಲಾಗಿದೆ.
- ಪ್ರತಿ ವರ್ಷ ಜೂನ್-26 ರಂದು ಅಂತರಾಷ್ಟ್ರೀಯ ಮಾದಕ ವಸ್ತು ಸೇವನೆ ವಿರೋಧಿ ದಿನವನ್ನಾಗಿ ಆಚರಣೆ ಮಾಡುತ್ತಿದ್ದು, ಈ ಸಂಬಂಧ ಠಾಣಾಧಿಕಾರಿಗಳು ತಮ್ಮ ಠಾಣಾ ವ್ಯಾಪ್ತಿಯಲ್ಲಿ ಬರುವ ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಲು ಕ್ರಮಕೈಗೊಳ್ಳಲಾಗುತ್ತಿದೆ.
- ಪ್ರಮುಖವಾಗಿ ಪಟ್ಟಣ ಪ್ರದೇಶಗಳಲ್ಲಿ ಶಾಲಾ ಕಾಲೇಜು, ನರ್ಸಿಂಗ್ ಕಾಲೇಜುಗಳ, ಹಾಸ್ಟಲ್‌ಗಳ, ಪ್ರವಾಸಿ ತಾಣಗಳ ಸಮೀಪ ನಡೆಸುತ್ತಿರುವ ಹೋಟೆಲ್/ಡಾಭಾಗಳ, ಪೆಟ್ಟಿಗೆ ಅಂಗಡಿಗಳ, ಚಹಾ ಅಂಗಡಿಯ ಮಾಲೀಕರಿಗೆ ಮಾದಕ ವಸ್ತುಗಳನ್ನು ಮಾರಾಟ ಮಾಡದಂತೆ ಸೂಕ್ತ ಎಚ್ಚರಿಕೆಗಳನ್ನು ನೀಡಲಾಗಿರುತ್ತದೆ.
- ರಾಜ್ಯದಲ್ಲಿ ಸಾರ್ವಜನಿಕರು ಮಾದಕ ವಸ್ತುಗಳ ಸಾಗಣೆ/ವ್ಯಸನದ ಬಗ್ಗೆ ರಹಸ್ಯ ಮಾಹಿತಿಗಳನ್ನು ಟೋಲ್ ಫ್ರೀ ಸಂಖ್ಯೆ 1908 ದೂರವಾಣಿಯ ಮುಖಾಂತರ ಸಂಪರ್ಕಿಸಿ ಮಾಹಿತಿ ನೀಡುವ ಸೌಲಭ್ಯವನ್ನು ಒದಗಿಸಲಾಗಿರುತ್ತದೆ.
- ಮಾದಕ ವಸ್ತುಗಳು(ಗಾಂಜಾ) ಸರಬರಾಜು ಆಗುವ ಮಾರ್ಗಗಳ ಮೇಲೆ ತೀವ್ರ ನಿಗಾವಣೆ ಇಡಲಾಗಿದೆ.
- ಡಾರ್ಕ್ ನೆಟ್ (Darknet), ಮುಖಾಂತರ ಡ್ರಗ್ಸ್ ಸರಬರಾಜು ಜಾಲವನ್ನು ಪತ್ತೆ ಮಾಡಿ ಕಾನೂನು ಕ್ರಮ ಕೈಗೊಳ್ಳಲಾಗಿರುತ್ತದೆ.
- ವಿದೇಶಗಳಿಂದ ಪೋಸ್ಟಲ್/ಕೊರಿಯರ್ಸ್ ಮುಖಾಂತರ ಡ್ರಗ್ಸ್ ಸರಬರಾಜು ಮಾಡುತ್ತಿದ್ದ ಜಾಲಗಳ ಮೇಲೆ ನಿಗಾ ಇಡಲಾಗಿದೆ.
- ರಾಜ್ಯದಲ್ಲಿ ಡ್ರಗ್ಸ್ ಅಕ್ರಮಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ಸಲುವಾಗಿ NCB, DRI, Customs, Railway, Education ಇಲಾಖೆಗಳ ಅಧಿಕಾರಿಗಳ ಸಮನ್ವಯ ಸಭೆಯನ್ನು ನಡೆಸಲಾಗಿದೆ.
- ಮಾದಕ ವಸ್ತುಗಳ ಅಕ್ರಮ ಸಾಗಾಣಿಕೆ ಮತ್ತು ಮಾರಾಟ ತಡೆಗಟ್ಟುವ ಸಲುವಾಗಿ, ಠಾಣಾ ಮಟ್ಟದಲ್ಲಿ ಬಾತ್ಮಿದಾರರಿಂದ ಗೌಪ್ಯ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ.
- ಮಾದಕ ದ್ರವ್ಯ ವ್ಯಸನದ ದುಷ್ಪರಿಣಾಮದ ಕುರಿತು ಸಾರ್ವಜನಿಕರ ಗಮನ ಸೆಳೆಯಲು ಬ್ಯಾನರ್, ಪೋಸ್ಟರ್‌ಗಳನ್ನು ಜನಸಂದಣಿ ಇರುವ ಸ್ಥಳಗಳಲ್ಲಿ ಪ್ರದರ್ಶಿಸಿ ಅರಿವು ಮೂಡಿಸಲಾಗಿರುತ್ತದೆ.

- ಕೊಳಚೆ ಪ್ರದೇಶಗಳಲ್ಲಿ ಸಾರ್ವಜನಿಕ ಸಭೆ, ಮೆರವಣಿಗೆಗಳನ್ನು ನಡೆಸುವುದರ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಲು ಹಾಗೂ ಸಾರ್ವಜನಿಕರಲ್ಲಿ ಮಾದಕ ವಸ್ತುಗಳ ಸೇವನೆ ವಿರುದ್ಧ ಜಾಗೃತಿ ಮೂಡಿಸಲು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.
- ಠಾಣಾ ಸರಹದ್ದಿನ ಬೀಟ್ ಮತ್ತು ಸಬ್-ಬೀಟ್‌ಗಳಲ್ಲಿ ಆಗ್ಗಿಂದಾಗ್ಗೆ ಸಭೆಯನ್ನು ನಡೆಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.
- ಡ್ರಗ್ ಅಪರಾಧ ಕೃತ್ಯಗಳಲ್ಲಿ ತೊಡಗಿರುವ ವಿದೇಶಿಯರನ್ನು ದಸ್ತಗಿರಿ ಮಾಡಿ ಅವರುಗಳ ಪಾಸ್‌ಪೋರ್ಟ್‌ಗಳನ್ನು ಮುಟ್ಟುಗೋಲು ಹಾಕಿಕೊಂಡು ಕಾನೂನಿನ ಕ್ರಮ ಕೈಗೊಳ್ಳಲಾಗುತ್ತಿದೆ.
- ವಿದೇಶಿಯರು ವಾಸದ ಬಗ್ಗೆ ಮಾಹಿತಿಯನ್ನು ಸಂಬಂಧಪಟ್ಟ ಪೊಲೀಸ್ ಠಾಣೆಗಳಿಗೆ ಒದಗಿಸುವಂತೆ ಸುತ್ತೋಲೆಯ ಮೂಲಕ ನಿರ್ದೇಶನ ನೀಡಲಾಗಿದೆ.
- ಒಂದು ಬಾರಿಗಿಂತ ಹೆಚ್ಚು ಬಾರಿ ಎನ್.ಡಿ.ಪಿ.ಎಸ್. ಪ್ರಕರಣಗಳಲ್ಲಿ ಬಾಗಿಯಾದ ಆರೋಪಿತರಿಗೆ PIT-NDPS ಹಾಗೂ ಗೂಂಡಾಕಾಯ್ದೆ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಲು ಕ್ರಮ ಕೈಗೊಳ್ಳಲಾಗಿದೆ.
- ರಾಜ್ಯ ಹಾಗೂ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಅನಿರೀಕ್ಷಿತ ತಪಾಸಣೆ ಮಾಡಲಾಗುತ್ತಿದೆ.
- ಡಾಬಾಗಳು ಹಾಗೂ ಹೆದ್ದಾರಿ ಹೋಟೇಲ್‌ಗಳಲ್ಲಿ ಅನಿರೀಕ್ಷಿತ ತಪಾಸಣೆ ಕೈಕೊಳ್ಳಲಾಗುತ್ತಿದೆ.
- ಗಾಂಜಾ ಬೆಳೆಯುವವರ ಬಗ್ಗೆ ಬಾತ್ಮಿದಾರರಿಂದ ಸೂಕ್ಷ್ಮ ರೀತಿಯಿಂದ ಮಾಹಿತಿ ಸಂಗ್ರಹಿಸಿ ದಾಳಿ ಕೈಗೊಂಡು ಆರೋಪಿತರ ವಿರುದ್ಧ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ.
- ಔಷಧ ನಿಯಂತ್ರಣ ಇಲಾಖೆಯೊಂದಿಗೆ ಸಂಪರ್ಕಿಸಿ ಅನಧಿಕೃತವಾದ ಮಾಧಕ ದ್ರವ್ಯಗಳ [ ಔಷಧಿಗಳ] ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿಕೊಂಡು ಅಂತಹ ಅನಧಿಕೃತ ಔಷಧಿಗಳ ಸಂಗ್ರಹ, ಮಾರಾಟ, ಉತ್ಪಾದನೆ ಬಗ್ಗೆ ಮಾಹಿತಿ ಪಡೆದು ಕಾನೂನು ಕ್ರಮ ಜರುಗಿಸಲು ಕ್ರಮ ಕೈಗೊಳ್ಳಲಾಗುತ್ತಿರುತ್ತದೆ.
- ಸೋಶಿಯಲ್ ಮಿಡಿಯಾ ಮುಖಾಂತರವಾಗಿ ಎಸ್‌ಎಂಎಸ್/ವ್ಯಾಟ್ಸ್ಯಾಪ್ ಹಾಗೂ ಇನ್ನಿತರೇ ರೂಪದಲ್ಲಿ ಯುವಜನತೆಗೆ ತಲುಪುವ ಹಾಗೆ ಮಾದಕ ವಸ್ತುಗಳ ಸೇವನೆಯಿಂದ ಆರೋಗ್ಯದ ಮೇಲೆ ಆಗುವ ದುಷ್ಪರಿಣಾಮಗಳ ಬಗ್ಗೆ ತಿಳಿ ಹೇಳಲಾಗುತ್ತಿದೆ.
- ನಗರಗಳಲ್ಲಿ ನಡೆಯುವ ಪಾರ್ಟಿ, ಇವೆಂಟ್‌ಗಳಲ್ಲಿ ಭಾಗವಹಿಸುವವರ ಮತ್ತು ಆಯೋಜಕರ ಮೇಲೆ ನಿಗಾ ಇಟ್ಟು ಇಂತಹ ಕಾರ್ಯಕ್ರಮಗಳಲ್ಲಿ ಗಾಂಜಾ ಮತ್ತು ಇನ್ನಿತರ ಮಾದಕ ವಸ್ತುಗಳ ಬಳಕೆಯಾಗದಂತೆ ಕಟ್ಟು ನಿಟ್ಟಿನ ಕ್ರಮ ಕೈಗೊಳ್ಳಲಾಗುತ್ತಿದೆ.

ಮಾದಕ ವಸ್ತುಗಳ ಕಳ್ಳ ಸಾಗಾಣಿಕೆ, ಸರಬರಾಜು ಮತ್ತು ವ್ಯಸನಿಗಳ ಮೇಲೆ ಎನ್‌ಡಿಪಿಎಸ್ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಂಡು ಕಾನೂನು ರೀತ್ಯಾ ಕ್ರಮಗಳನ್ನು ಕೈಗೊಳ್ಳಲಾಗುತ್ತದೆ.

ಒಇ 3 ಪಿಎನ್‌ಡಿ 2022

(ಆರಗ ಜ್ಞಾನೇಂದ್ರ)
ಗೃಹ ಸಚಿವರು